ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು	:	ಶ್ರೀಮತಿ ವೀಣಾ ಅಚ್ಚಯ್ಯ ಎಸ್
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	144 (97)
ಉತ್ತರಿಸಬೇಕಾದ ದಿನಾಂಕ	:	03.03.2020

ಕ್ರ.ಸಂ	ಪ್ರಶ್ನೆ	ಉತ್ತರ
1	ಕೊಡಗು ಜಿಲ್ಲೆಯಲ್ಲಿ ಹಲವಾರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹೊಸದಾಗಿ ಕಟ್ಟಡ ನಿರ್ಮಾಣ ಮಾಡಿಕೊಳ್ಳಲು ಸ್ವಂತ ಆರ್ಥಿಕ ಬಲವಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿವೆಯೇ?	ಹೌದು.
2	ಬಂದಿದ್ದಲ್ಲಿ ಪ್ರಸಕ್ತ ಆರ್ಥಿಕ ವರ್ಷದಲ್ಲಿ ಜಿಲ್ಲೆಯಲ್ಲಿನ ಎಷ್ಟು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಹೊಸ ಕಟ್ಟಡ ನಿರ್ಮಾಣಕ್ಕೆ ಆರ್ಥಿಕ ಸೌಲಭ್ಯ ಒದಗಿಸಲಾಗಿದೆ? (ವಿವರ ನೀಡುವುದು)	ಕೊಡಗು ಜಿಲ್ಲೆಯಲ್ಲಿ ಒಟ್ಟು 73 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಕಾರ್ಯನಿರ್ವಹಿಸುತ್ತಿದ್ದು, ಈ ಪೈಕಿ 71 ಸಹಕಾರ ಸಂಘಗಳು ಸ್ವಂತ ಕಟ್ಟಡವನ್ನು ಹೊಂದಿರುತ್ತದೆ. ಉಳಿದ 2 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹೊಸದಾಗಿ ಕಟ್ಟಡ ನಿರ್ಮಾಣ ಮಾಡಿಕೊಳ್ಳಲು ಸ್ವಂತ ಆರ್ಥಿಕ ಬಲವಿಲ್ಲದಿರುವುದು ವರದಿಯಾಗಿರುತ್ತದೆ. ಆದರೆ, ಪ್ರಸಕ್ತ 2019-20ನೇ ಸಾಲಿನಲ್ಲಿ ಆಯವ್ಯಯದಲ್ಲಿ ಅವಕಾಶವಿಲ್ಲದ ಕಾರಣ ಕೊಡಗು ಜಿಲ್ಲೆಯಲ್ಲಿರುವ ಯಾವುದೇ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಹೊಸ ಕಟ್ಟಡ ನಿರ್ಮಾಣಕ್ಕೆ ಅನುದಾನ ಒದಗಿಸಿರುವುದಿಲ್ಲ.

ಸಿಒ 78 ಸಿಎಲ್ಎಸ್ 2020

(ಎಸ್.ಟಿ ಸೋಮಶೇಖರ್)
ಸಹಕಾರ ಸಚಿವರು